**ಕರ್ನಾಟಕ ಪರೀಕ್ಷಾ ಪ್ರಾಧಿಕಾರ**
**ಬೆಂಗಳೂರು**

ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರ ನೇಮಕಾತಿ
ತಾತ್ಕಾಲಿಕ ಸರಿ ಉತ್ತರಗಳಿಗೆ ಆಕ್ಷೇಪಣೆಗಳನ್ನು ಸಲ್ಲಿಸುವ ಬಗ್ಗೆ ಸೂಚನೆಗಳು

**ಅಭ್ಯರ್ಥಿಗಳಿಗೆ ಸೂಚನೆಗಳು**

1. ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರ ನೇಮಕಾತಿ ಸಂಬಂಧ ದಿನಾಂಕ **29-11-2018** ರಿಂದ **08-12-2018**ರ ನಡೆದ ಸ್ಪರ್ಧಾತ್ಮಕ ಪರೀಕ್ಷೆಯ ಎಲ್ಲಾ ವಿಷಯಗಳ ಪತ್ರಿಕೆ 1 ಮತ್ತು ಪತ್ರಿಕೆ 2 ಹಾಗು ಕಡ್ಡಾಯ ಕನ್ನಡ ಭಾಷೆಯ ಪತ್ರಿಕೆಯೂ ಸೇರಿದಂತೆ ಎಲ್ಲಾ ಪತ್ರಿಕೆಗಳ ವಿಷಯವಾರು ತಾತ್ಕಾಲಿಕ ಸರಿ ಉತ್ತರ ಗಳನ್ನು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ದಿನಾಂಕ 14-01-2019 ರಂದು ಪ್ರಕಟಿಸಲಾಗಿದೆ.
2. ಪ್ರಕಟಿಸಿರುವ ತಾತ್ಕಾಲಿಕ ಸರಿ ಉತ್ತರಗಳಿಗೆ ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಆಧಾರ ಸಹಿತ ಆಕ್ಷೇಪಣೆಗಳನ್ನು ದಿನಾಂಕ 17-01-2019 ರ ಸಂಜೆ 5.30 ರಿಂದ ದಿನಾಂಕ 22-01-2019 ರ ಸಂಜೆ 5.30 ರವರೆಗೆ ಆನ್‌ಲೈನ್ ಮೂಲಕ ಸಲ್ಲಿಸಬಹುದಾಗಿದೆ.
3. ಆಕ್ಷೇಪಣೆಗಳ ವಿವರಗಳನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಆನ್‌ಲೈನ್ ಮೂಲಕವೇ ದಾಖಲಿಸಲು / ಸಲ್ಲಿಸಲು ಸೂಚಿಸಿದೆ.
4. ಅಭ್ಯರ್ಥಿಗಳು ಆಕ್ಷೇಪಣೆಗಳನ್ನು ಸಲ್ಲಿಸಲು, ಪ್ರಾಧಿಕಾರದ ವೆಬ್‌ಸೈಟಿನಲ್ಲಿ ನಿಗದಿತ ಲಿಂಕ್ ಅನ್ನು ಆಯ್ಕೆ ಮಾಡಿಕೊಂಡು ತಮ್ಮ ವಿವರಗಳನ್ನು ದಾಖಲಿಸುವುದು.
5. ನಂತರ ಅಭ್ಯರ್ಥಿಗಳು ಆಕ್ಷೇಪಣೆಗಳನ್ನು ಸಲ್ಲಿಸಬೇಕಾದ ವಿಷಯ, ಪತ್ರಿಕೆ, ಪ್ರಶ್ನೆ ಸಂಖ್ಯೆ, ಪ್ರಶ್ನೆ ಪತ್ರಿಕೆ ವರ್ಷನ್ ಕೋಡ್ ಮುಂತಾದವುಗಳನ್ನು ಆಯ್ಕೆ ಮಾಡಿಕೊಳ್ಳಬೇಕು. ನಂತರ ಆಕ್ಷೇಪಣೆಗಳ ವಿವರಗಳನ್ನು ದಾಖಲಿಸಬೇಕು.
6. ನಂತರ ಆಕ್ಷೇಪಣೆಗನುಗುಣವಾಗಿ ಸಂಬಂಧಿಸಿದ ಆಧಾರಗಳನ್ನು ಪಿಡಿಎಫ್ ರೂಪದಲ್ಲಿ ಅಪ್‌ಲೋಡ್ ಮಾಡಬೇಕು.

**ಗಮನಿಸಿ:**

1. ಆಧಾರ ರಹಿತ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.
2. ಆಕ್ಷೇಪಣೆಗಳನ್ನು ಪರಿಶೀಲಿಸಿ ವಿಷಯ ತಜ್ಞರ ಸಮಿತಿಯು ನಿರ್ಧರಿಸಿ ನೀಡುವ ಕೀ ಉತ್ತರಗಳು ಅಂತಿಮವಾಗಿರುತ್ತದೆ.

ಹೆಚ್ಚಿನ ವಿವರಗಳಿಗಾಗಿ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ಗೆ ಭೇಟಿ ನೀಡಲು ಕೋರಿದೆ.

ಕಾರ್ಯನಿರ್ವಾಹಕ ನಿರ್ದೇಶಕರು

ದಿನಾಂಕ: 14-01-2019

ಬೆಂಗಳೂರು